ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಬಿ. ಡಿ. ಎ. ಬಡಾವಣೆಗಳಲ್ಲಿ ಮೂಲಭೂತ ಸವಲತ್ತು ಗಳ ಕೊರತೆ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

472 (577) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಜನರಿಗೆ ಹಲವಾರು ಬಡಾವಣೆಗಳನ್ನು ನಿರ್ಮಿಸಿದ್ದು, ನಿರ್ಮಿಸಲಾಗಿರುವ ಅನೇಕ ಬಡಾವಣೆಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಬೆಂಗಳೂರು ಅಭಿವೃದ್ಧಿ, ಪ್ರಾಧಿಕಾರವು ನಿರ್ಮಿಸಿದ ಯಾವ ಯಾವ ಬಡಾವಣೆಗಳು ಮೂಲಭೂತ ಸವಲತ್ತುಗಳ ಕೊರತೆ ಎದುರಿಸುತ್ತಿದೆ;

(ಇ) ಅಂತಹ ಬಡಾವಣೆಗಳಲ್ಲಿ ಜನರಿಗೆ ಬೇಕಾದ ವಿಸ್ತಾರವಾದ ರಸ್ತೆ ಶುದ್ಧ ಕುಡಿಯುವ ನೀರಿನ ಪೂರೈಕೆ ಒಳಚರಂಡಿ ಹಾಗೂ ವಿದ್ಯುತ್ತಿನ ಅನುಕೂಲತೆ ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಈ) ಬೆಂಗಳೂರು ನಗರದ ಕೆಲವು ಭಾಗಗಳು ಈಗಾಗಲೇ ದೊಡ್ಡ ಪ್ರಮಾಣದಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ಎದುರಿಸುತ್ತಿದ್ದು, ಹೊಸದಾಗಿ ನಿರ್ಮಿಸುತ್ತಿರುವ ಬಡಾವಣೆಗಳಿಗೆ ಯಾವ ಮೂಲಗಳಿಂದ ನೀರು ಒದಗಿಸಲು ಯೋಜನೆ ರೂಪಿಸಲಾಗಿದೆ?